**Akashvani : Bangalore**
**Regional Bulletin In Kannada**
**13.07.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು :

೧. ಬೆಂಗಳೂರಿನ ಸಂಗೊಳ್ಳಿರಾಯಣ್ಣ ರೈಲು ನಿಲ್ದಾಣ ಒಂದು ಸಾವಿರದ ೩೫೦ ಕೋಟಿ ರೂಪಾಯಿ ವೆಚ್ಚದಲ್ಲಿ ಮೇಲ್ದರ್ಜೆಗೆ - ಕೇಂದ್ರ ಸಚಿವ ವಿ.ಸೋಮಣ್ಣ

೨. ಹುಬ್ಬಳ್ಳಿಯಿಂದ ಆಪಲ್ ಮೊಬೈಲ್ ಬಿಡಿಭಾಗ ಅಮೆರಿಕಾ ಸೇರಿದಂತೆ ವಿವಿಧ ರಾಷ್ಟ್ರಗಳಿಗೆ ರಫ್ತು : ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಂತಸ

೩. ನಾಳೆ ಸಿಗಂದೂರು ಸೇತುವೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರಿಂದ ಲೋಕಾರ್ಪಣೆ

೪. ರಾಜ್ಯದ ವಿವಿಧೆಡೆ ರಾಷ್ಟ್ರೀಯ ಲೋಕ ಅದಾಲತ್ : ಬಾಕಿ ಇದ್ದ ಲಕ್ಷಾಂತರ ಪ್ರಕರಣಗಳ ಇತ್ಯರ್ಥ

><><><><><><><><

ಕೈಗಾರಿಕಾ ಉತ್ಪಾದನಾ ಕ್ಷೇತ್ರದಲ್ಲಿ ಕೌಶಲ್ಯ, ಪ್ರಮಾಣ ಮತ್ತು ವೇಗ ಇಂದಿನ ತುರ್ತು ಅಗತ್ಯವಾಗಿದ್ದು, ಅದನ್ನು ಮೈಗೂಡಿಸಿಕೊಂಡಲ್ಲಿ ಭಾರತ ಸಮಗ್ರ ಅಭಿವೃದ್ಧಿಯ ಜತೆಗೆ ಮತ್ತಷ್ಟು ಆರ್ಥಿಕ ಬಲಿಷ್ಠ ರಾಷ್ಟ್ರವಾಗಲಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯ ಗೋಕುಲ ಕೈಗಾರಿಕಾ ಪ್ರದೇಶದಲ್ಲಿ  ಕರ್ನಾಟಕ ಮೆಟೀರಿಯಲ್ ಟೆಸ್ಟಿಂಗ್ ಮತ್ತು ರಿಸರ್ಚ್ ಸೆಂಟರ್‌ನ ನೂತನ  ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಇದು ಪ್ರಧಾನಿ ನರೇಂದ್ರ ಮೋದಿಯವರ ಕನಸಾಗಿದೆ ಎಂದು ತಿಳಿಸಿದ್ದಾರೆ. ಕರ್ನಾಟಕ ಮೆಟೀರಿಯಲ್ ಟೆಸ್ಟಿಂಗ್ ಆಂಡ್ ರಿಸರ್ಚ್ ಸೆಂಟರ್‌ವತಿಯಿಂದ ನೀಡಲಾಗುವ ಪ್ರಮಾಣ ಪತ್ರದ ಬಗ್ಗೆ ಹೆಚ್ಚು ಪ್ರಚಾರ ಮಾಡುವ ಅವಶ್ಯಕತೆ ಇದೆ. ಸಂಸ್ಥೆಯನ್ನು ಮತ್ತಷ್ಟು ಎತ್ತರಕ್ಕೆ ಬೆಳೆಸಿ, ಗುಣಮಟ್ಟದ ವಸ್ತುಗಳ ಉತ್ಪಾದನೆಗೆ ಕೈಜೋಡಿಸುವಂತೆ ಕರೆನೀಡಿದ್ದಾರೆ. ಆಪಲ್ ಮೊಬೈಲ್‌ನ ಬಿಡಿಭಾಗ ಹುಬ್ಬಳ್ಳಿಯಿಂದ ಅಮೆರಿಕಾ ಸೇರಿದಂತೆ ವಿವಿಧ ದೇಶಕ್ಕೆ ರಫ್ತು ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದ್ದಾರೆ.

**ಧ್ವನಿ: ಕೇಂದ್ರ ಸಚಿವ ಪ್ರಹ್ಲಾದ ಜೋಶಿ ( ೩೪ ಸೆಕೆಂಡುಗಳು )**

ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

><><><><><><><><

ಬೆಂಗಳೂರು ನಗರದ ಅಭಿವೃದ್ಧಿಗೆ ರೈಲ್ವೇ ಇಲಾಖೆ ಕೊಡುಗೆ ಅಪಾರ ಎಂದು ಕೇಂದ್ರ ರೈಲ್ವೇ ಖಾತೆ ರಾಜ್ಯ ಸಚಿವ ವಿ ಸೋಮಣ್ಣ ತಿಳಿಸಿದ್ದಾರೆ. ಚಲ್ಲಘಟ್ಟದಲ್ಲಿಂದು ಎಲ್.ಸಿ ಸಂಖ್ಯೆ ೧೫ರ ಬದಲಿಗೆ ನಿರ್ಮಿಸಲಾದ ನೂತನ ರಸ್ತೆ ಕೆಳ ಸೇತುವೆ ಲೋಕಾರ್ಪಣೆಗೊಳಿಸಿ, ರಾಮೋಹಳ್ಳಿಯಲ್ಲಿ ಎಲ್.ಸಿ ಸಂಖ್ಯೆ ೧೬ರ ಬದಲಿಗೆ ನೂತನ ರಸ್ತೆ ಕೆಳ ಸೇತುವೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು ಕಳೆದ ೧೦ ವರ್ಷಗಳಲ್ಲಿ ಬೆಂಗಳೂರಿನಲ್ಲಿ ರೈಲ್ವೇ ಇಲಾಖೆ ೬೪ಂಕ್ಕೂ ಹೆಚ್ಚು ಯೋಜನೆಗಳನ್ನು ಅನುಷ್ಟಾನಗೊಳಿಸಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಯಶವಂತಪುರ ರೈಲ್ವೆ ನಿಲ್ದಾಣ ಮೇಲ್ದರ್ಜೆಗೆ ೪೮೦ ಕೋಟಿ ಹಾಗೂ ಕಂಟೋನ್ಮೆಂಟ್ ರೈಲು ನಿಲ್ದಾಣ ಮೇಲ್ದರ್ಜೆಗೆ ೪೮೦ ಕೋಟಿ ರೂಪಾಯಿ, ಸಂಗೊಳ್ಳಿರಾಯಣ್ಣ ರೈಲು ನಿಲ್ದಾಣ ಮೇಲ್ದರ್ಜೆಗೆ ಒಂದು ಸಾವಿರದ ೩೫೦ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ ಎಂದು ಹೇಳಿದ್ದಾರೆ. ಇದೇ ವೇಲೆ ಬೆಂಗಳೂರು ರೈಲ್ವೇ ಯಾರ್ಡ್ ನವೀಕರಣ ಮಾಡಲಾಗುವುದು ಎಂದು ತಿಳಿಸಿದ್ದಾರೆ.

**ಧ್ವನಿ : ರೈಲ್ವೇ ಖಾತೆ ರಾಜ್ಯ ಸಚಿವ ವಿ ಸೋಮಣ್ಣ (೩೭ ಸೆಕೆಂಡುಗಳು)**

ಕಾರ್ಯಕ್ರಮದಲ್ಲಿ ಕೇಂದ್ರದ ಎಂ.ಎಸ್.ಎಂ.ಇ ಹಾಗೂ ಕಾರ್ಮಿಕ ಮತ್ತು ಉದ್ಯೋಗ ಇಲಾಖೆಯ ರಾಜ್ಯಖಾತೆ ಸಚಿವೆ. ಶೋಭಾ ಕರಂದ್ಲಾಜೆ ಹಾಗೂ ರೈಲ್ವೆ ಅಧಿಕಾರಿಗಳು ಉಪಸ್ಥಿತರಿದ್ದರು.

><><><><><><><><

ಶಿವಮೊಗ್ಗ ಶರಾವತಿ ನದಿಯ ಹಿನ್ನೀರಿನಲ್ಲಿ ನಿರ್ಮಿಸಲಾಗಿರುವ ಬಹುನಿರೀಕ್ಷಿತ ಸಿಗಂದೂರು ಸೇತುವೆಯನ್ನು ನಾಳೆ ಕೆಂದ್ರ ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಲೋಪಾರ್ಪಣೆಗೊಳಿಸಲಿದ್ದಾರೆ. ಸುಮಾರು ೪೨೩ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಈ ಸೇತುವೆಯು, ಈ ಭಾಗದ ಜನರ ದಶಕಗಳ ಕನಸನ್ನು ನನಸಾಗಿಸಿದೆ. ಇದು ಕರ್ನಾಟಕದ ಅತಿ ಉದ್ದದ ಒಳನಾಡು ಕೇಬಲ್-ಸ್ಟೇಯ್ಡ್ ಸೇತುವೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಇದೀಗ ಸೇತುವೆ ಕಾಮಗಾರಿ ಬಹುತೇಕ ಪೂರ್ಣಗೊಂಡ ಹಿನ್ನೆಲೆ ಸಿಗಂದೂರು ಸೇತುವೆಯಲ್ಲಿ ಲೋಡ್ ಪರೀಕ್ಷೆ ಮುಗಿಸಿ ಲೋಕಾರ್ಪಣೆಗೊಳ್ಳಲಿದೆ. ಸಿಗಂದೂರು ಸೇತುವೆಯ ಲೋಕಾರ್ಪಣೆ ಬಳಿಕ ಸಾಗರದ ನೆಹರು ಮೈದಾನದಲ್ಲಿ ನಡೆಯುವ ಸಾರ್ವಜನಿಕ ಸಭೆಯಲ್ಲಿ

ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಮಂಜೂರಾಗಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಕೇಂದ್ರ ಸಚಿವ ಗಡ್ಕರಿ  ಚಾಲನೆ ನೀಡಲಿದ್ದಾರೆ. ೬೨೫ ರೂಪಾಯಿ ಕೋಟಿ ವೆಚ್ಚದ ರಾಷ್ಟ್ರೀಯ ಹೆದ್ದಾರಿ ೩೬೯ ಇ -ಸಾಗರದಿಂದ ಮರುಕುಟಿಕದ ವರೆಗೆ ಸಾಗರ ನಗರದ ಬೈಪಾಸ್ ಸೇರಿ ದ್ವಿಪಥ ಸಂಪರ್ಕ ರಸ್ತೆಯ ಶಂಕು ಸ್ಥಾಪನಾ ಸಮಾರಂಭ ನಡೆಯಲಿದೆ.

><><><><><><><><

ರಾಜ್ಯಾದ್ಯಂತ ವಿವಿಧೆಡೆ ನಿನ್ನೆ ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದ್ದು, ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇದ್ದ ಹಲವಾರು ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಯಿತು. ಕೊಪ್ಪಳ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇದ್ದ ಒಟ್ಟು ೮೦೫೮ ಪ್ರಕರಣಗಳ ಪೈಕಿ ೬೫೦೨ ಪ್ರಕರಣಗಳನ್ನು ಇತ್ಯರ್ಥ ಮಾಡಲಾಯಿತು. ವಿಮೆ, ನೀರಿನ ಬಿಲ್, ಬ್ಯಾಂಕ್ ಸಾಲ, ಮನೆ ಕರ, ಕೌಟುಂಬಿಕ ದೌರ್ಜನ್ಯ, ಜೀವನಾಂಶ, ಚೆಕ್ ಬೌನ್ಸ್ ಪ್ರಕರಣಗಳು, ಜನನ ಮರಣ, ಸಿವಿಲ್ ಕೇಸ್, ಕ್ರಿಮಿನಲ್ ಕೇಸ್, ಮೋಟಾರ್ ವಾಹನ ಅಪಘಾತ ಹಾಗೂ ಇತ್ಯಾದಿ ಸೇರಿದಂತೆ ವಿಮೆ, ನೀರಿನ ಬಿಲ್, ಮೋಟಾರ್ ವಾಹನ ಅಪಘಾತ ಸೇರಿದಂತೆ ವಿವಿಧ ಪ್ರಕರಣಗಳ ಇತ್ಯರ್ಥ ಮಾಡಲಾಯಿತು. ಉತ್ತರಕನ್ನಡ ಜಿಲ್ಲಾದ್ಯಂತ ಒಟ್ಟು ೨೬ ಪೀಠಗಳಲ್ಲಿ ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ೨೭ ಸಾವಿರದ ೫೦೬ ಪ್ರಕರಣಗಳನ್ನು ಇತ್ಯರ್ಥ ಮಾಡಲಾಯಿತು. ನ್ಯಾಯಾಲಯದಲ್ಲಿದ್ದ ೨೧ ಸಾವಿರದ ೨೪೩ ವ್ಯಾಜ್ಯ ಪೂರ್ವ ಪ್ರಕರಣಗಳು ಹಾಗೂ ಬಾಕಿ ಇರುವ ೬ ಸಾವಿರದ ೨೬೩ ಪ್ರಕರಣಗಳಲ್ಲಿ  ಸೇರಿದಂತೆ ಒಟ್ಟೂ ೨೭ ಸಾವಿರದ ೫೦೬ ಪ್ರಕರಣಗಳು ಇತ್ಯರ್ಥವಾಗಿದೆ. ಬಳ್ಳಾರಿ ಜಿಲ್ಲೆಯ ೨೮ ನ್ಯಾಯ ಪೀಠಗಳಲ್ಲಿ ನಡೆದ ರಾಷ್ಟ್ರೀಯ ಲೋಕ ಅದಾಲತ್ ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಉಳಿದಿದ್ದ, ೨೫ ಸಾವಿರದ ೬೧೧ ಪ್ರಕರಣಗಳನ್ನು ಕೈಗೆತ್ತಿಕೊಂಡು ಅದರಲ್ಲಿ ೧೬ ಸಾವಿರದ ೪೨೪ ಪ್ರಕರಣಗಳನ್ನು  ಇತ್ಯರ್ಥ ಮಾಡಲಾಗಿದೆ. ಕೋಲಾರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಆಶ್ರಯದಲ್ಲಿ ನಿನ್ನೆ ಕೋಲಾರ ಜಿಲ್ಲೆಯಾದ್ಯಂತ ರಾಷ್ಟ್ರೀಯ ಲೋಕ ಅದಾಲತ್ ನಡೆಯಿತು. ರಾಜೀ ಸಂಧಾನದ ಮೂಲಕ ಸಿವಿಲ್, ಕ್ರಿಮಿನಲ್, ವಿಮಾ ಪರಿಹಾರ ಸೇರಿದಂತೆ ಒಂದು ಲಕ್ಷ ಐವತ್ತಾರು ಸಾವಿರ ಎಂಟು ನೂರು ಅರವತ್ತು ಪ್ರಕರಣಗಳು ಇತ್ಯರ್ಥಗೊಂಡಿವೆ.

><><><><><><><><

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜುಲೈ ತಿಂಗಳಲ್ಲಿ ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಹೆಚ್ಚುವರಿಯಾಗಿ ೫ ಕೆ.ಜಿ ಅಕ್ಕಿ ವಿತರಣೆ ಮಾಡಲಾಗುತ್ತಿದೆ ಎಂದು ಯಾದಗಿರಿ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ

ಉಪ ನಿರ್ದೇಶಕ ಅನಿಲಕುಮಾರ ಡವಳಗಿ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ ಪಡಿತರ ಚೀಟಿಗೆ ೧೪ ಕೆ.ಜಿ ಅಕ್ಕಿ ಮತ್ತು ೨೧ ಕೆ.ಜಿ ಜೋಳ ಹಾಗೂ ಕೇಂದ್ರ ವ್ಯಾಪ್ತಿಯ ಪಿಎಚ್‌ಎಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ ೨ ಕೆಜಿ, ಅಕ್ಕಿ ಮತ್ತು ೩ ಕೆಜಿ ಜೋಳ ಮತ್ತು ರಾಜ್ಯ ವ್ಯಾಪ್ತಿಯ ಪಡಿತರ ಚೀಟಿದಾರರಿಗೆ ೫ ಕೆಜಿ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿರುವ ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿಎಚ್‌ಎಚ್ (ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಹೆಚ್ಚುವರಿಯಾಗಿ ೫ ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

><><><><><><><><

ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ೨೦೨೪-೨೫ನೇ ಸಾಲಿಗೆ ಸಹಾಯಧನ ಸೌಲಭ್ಯಗಳನ್ನು ಕಲ್ಪಿಸಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕ ಶರಣಬಸವ ತಿಳಿಸಿದ್ದಾರೆ. ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಯಾದಗಿರಿ ಜಿಲ್ಲೆಗೆ ನೀಡಿರುವ ಗುರಿಗಳು ಬಾಕಿ ಉಳಿದಿದ್ದು, ಹೊಸದಾಗಿ ಮೀನು ಕೃಷಿ ಕೊಳ ನಿರ್ಮಾಣ, ಮೀನುಮರಿ ಪಾಲನಾ ಕೊಳಗಳ ನಿರ್ಮಾಣ, ಕ್ಷಾರ, ಲವಣಯುಕ್ತ ಜಮೀನಿನಲ್ಲಿ ಮೀನು ಕೃಷಿಕೊಳ ಮತ್ತು ಹೂಡಿಕೆ ವೆಚ್ಚ ಕುರಿತಂತೆ ಸಹಾಯಧನ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ, ಆಸಕ್ತ ಫಲಾನುಭವಿಗಳು ಸಂಬಂಧಪಟ್ಟ ದಾಖಲೆಗಳೊಂದಿಗೆ ಮೀನುಗಾರಿಕೆ ಸಹಾಯಕ ನಿರ್ದೇಶಕ ಯಾದಗಿರಿ, ಶಹಾಪುರ, ಸುರಪುರ ಕಚೇರಿಗೆ ಆಗಸ್ಟ್ ೧೨ರ ಒಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ಯಾದಗಿರಿ, ಶಹಾಪುರ, ಸುರಪುರ, ಮೀನುಗಾರಿಕೆ ಉಪನಿರ್ದೇಶಕ ಯಾದಗಿರಿ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು.

><><><><><><><><

ಹಿರಿಯ ಪತ್ರಕರ್ತ ಕೆ.ಬಿ.ಗಣಪತಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ.ಶಿವಕುಮಾರ್‌ಸಂತಾಪ ಸೂಚಿಸಿದ್ದಾರೆ. ಈ ಕುರಿತು ಜಾಲತಾಣದಲ್ಲಿ ಮುಖ್ಯಮಂತ್ರಿ ಅವರು, ಸುಮಾರು ಐದು ದಶಕಗಳ ಕಾಲ ಪತ್ರಿಕೋದ್ಯಮದಲ್ಲಿ ಅವಿರತ ದುಡಿದ ಗಣಪತಿ ಅವರು ವಸ್ತುನಿಷ್ಠ ಹಾಗೂ ವೃತ್ತಿಪರ ಬರಹಗಳಿಗೆ ಹೆಸರುವಾಸಿಯಾಗಿದ್ದು "ಸ್ಟಾರ್ ಆಫ್ ಮೈಸೂರು" ಪತ್ರಿಕೆಯ ಮೂಲಕ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಅಪಾರ ಓದುಗ ಬಳಗ ಸೃಷ್ಟಿಸಿದ ಗಣಪತಿಯವರು "ಮೈಸೂರು ಮಿತ್ರ" ದಿನಪತ್ರಿಕೆಯ ಸ್ಥಾಪಕ ಸಂಪಾದಕರಾಗಿ ಕೂಡ

ಸೇವೆ ಸಲ್ಲಿಸಿದ್ದಾರೆ. ಪತ್ರಿಕೋದ್ಯಮದಲ್ಲಿ ಅವರು ಮೂಡಿಸಿರುವ ಹೆಜ್ಜೆಗುರುತುಗಳು ಯುವ ಪತ್ರಕರ್ತರಿಗೆ ಸ್ಪೂರ್ತಿ ಮತ್ತು ಮಾದರಿಯಾಗಲಿ ಎಂದು ಹೇಳಿದ್ದಾರೆ.

><><><><><><><><

ಪ್ರಜಾಪ್ರಭುತ್ವದ ನಾಲ್ಕನೇ ಕಂಬವಾದ ಮಾಧ್ಯಮ ಸ್ವಸ್ಥ ಸಮಾಜ ನಿರ್ಮಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ರಾಜಕೀಯ, ಸಾರ್ವಜನಿಕ ಆಡಳಿತ ಹಾಗೂ ಮಾಧ್ಯಮ ಸಹಯೋಗದಲ್ಲಿ ಜವಾಬ್ದಾರಿಗಳನ್ನು ನಿರ್ವಹಿಸಿದರೆ ಸಮಾಜಕ್ಕೆ ಉತ್ತಮ ಸೇವೆ ಒದಗಿಸಲು ಸಾಧ್ಯವಾಗುತ್ತದೆ ಎಂದು ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಆಯೋಜಿಸಿದ ಪತ್ರಿಕಾ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಬೆಳಗಾವಿ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ ಅವರು, ಸುದ್ದಿ ಪ್ರಸಾರದ ಸ್ಪರ್ಧೆಗೆ ಒಳಗಾಗಿ ಮಾಡುವಾಗ ವಾಸ್ತವತೆಗೆ ವ್ಯತಿರಿಕ್ತವಾದ ವರದಿ ಆಗದಂತೆ ನೋಡಬೇಕು. ಸತ್ಯ ಕಂಡುಕೊಂಡು ವರದಿ ಮಾಡುವುದು ಅಗತ್ಯ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಹಿರಿಯ ಪತ್ರಕರ್ತರನ್ನು ಸನ್ಮಾನಿಸಿ ಗೌರವಿಸಲಾಯಿತು.

><><><><><><><><